# ಕರ್ನಾಟಕ ಸರ್ಕಾರದ ನಡವಳಗಳು

ವಿಷಯ:- ಶ್ರೀ ಜಾಫರ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ ಹಾಗೂ ಶ್ರೀ ಎನ್.ಹೆಚ್.ಕುಲಕರ್ಣಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ (ಹಾಲಿ ನಿವೃತ್ತ) ಇವರುಗಳ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ GLB-8594/2015/DRE-3 ದಿನಾಂಕ. 21.04.2017.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ GLB-8594/2015/DRE-3 ದಿನಾಂಕ. 15.04.2017.

-----

## ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 21.04.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಸತೀಶಕುಮಾರ ರಾಜು ಹುಗ್ಗಿ, ತೊನಸನಹಳ್ಳಿ(ಎಸ್) ಗ್ರಾಮ ಚಿತ್ತಾಪೂರ ತಾಲ್ಲೂಕು, ಕಲಬುರಗಿ ಜಿಲ್ಲೆ ಇವರು ಚಿತ್ತಾಪೂರ ತಾಲ್ಲೂಕಿನ ತೊನಸನಹಳ್ಳಿ(ಎಸ್) ಗ್ರಾಮದ ಶರಣ ನಗರದಲ್ಲಿ ಸಿ.ಸಿ.ರಸ್ತೆ ಕಾಮಗಾರಿ, ಸಿಂಗಲ್ ಫೇಸ್ ಮೋಟರ್ ಅಳವಡಿಸುವ ಕಾಮಗಾರಿ, 13ನೇ ಹಣಕಾಸು ಯೋಜನೆಯಡಿಯಲ್ಲಿ ನೀರು ನಿರ್ವಹಣೆ ಮಾಡುವ ಕಾಮಗಾರಿ, ಪೈಪ್‌ಲೈನ್ ಮತ್ತು ಸಿಸ್ಟರ್ನ್ ಅಳವಡಿಸುವ ಕಾಮಗಾರಿ ಹಾಗೂ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ರಿಪೇರಿ ಕಾಮಗಾರಿಗಳಲ್ಲಿ ಈ ಕೆಳಕಂಡ ಅಧಿಕಾರಿ/ನೌಕರರು ಹಣ ದುರುಪಯೋಗಪಡಿಸಿಕೊಂಡಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಶ್ರೀ ಜಾಫರ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ.
2. ಶ್ರೀ ನಿಂಗಣ್ಣ ಶಿವಶರಣಪ್ಪ ಹುಲಗೋಳ್ಕರ್, ತಾಲ್ಲೂಕು ಪಂಚಾಯತ್ ಸದಸ್ಯರು, ಚಿತ್ತಾಪೂರ ತಾಲ್ಲೂಕು, ಕಲಬುರಗಿ ಜಿಲ್ಲೆ.
3. ಶ್ರೀ ಎನ್.ಹೆಚ್.ಕುಲಕರ್ಣಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಗಳನ್ನು ಪಡೆಯಲಾಗಿದ್ದು, ಕಾಮಗಾರಿಗಳನ್ನು ಮಂಜೂರಾದ ಅಂದಾಜು ಪಟ್ಟಿಯಂತೆ ಅನುಷ್ಠಾನಗೊಳಿಸಲಾಗಿದೆಯೆಂದು, ಸದರಿ ದೂರು ಸುಳ್ಳು ದೂರಾಗಿರುತ್ತದೆಂದು. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆಂದು ತಿಳಿಸಿರುತ್ತಾರೆ.

ಅಲ್ಲದೆ, ಈ ಕುರಿತು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ, ಚಿತ್ತಾಪೂರ ಇವರಿಂದ ಪಡೆಯಲಾಗಿರುವ ವರದಿಯಲ್ಲಿ ಈ ಕಾಮಗಾರಿಗಳನ್ನು ಅನುಮೋದನೆಗೊಂಡ ಅಂದಾಜುಪಟ್ಟಿಯಂತೆ ನಿರ್ವಹಿಸಲಾಗಿದೆಯೆಂದು, ಇದರಲ್ಲಿ ಯಾವುದೇ ಅವ್ಯವಹಾರವಾಗಿಲ್ಲವೆಂದೂ ತಿಳಿಸುತ್ತಾ ಮೂರು ಕಾಮಗಾರಿಗಳಿಗೆ ಸಂಬಂಧಿಸಿದಂತೆ ದಾಖಲೆಗಳ ಪ್ರತಿಗಳನ್ನು ಲಗತ್ತಿಸಿರುತ್ತಾರೆಂದು ಮಾನ್ಯ ಉಪ ಲೋಕಾಯುಕ್ತ-1ರವರ ವರದಿಯಲ್ಲಿ ತಿಳಿಸಲಾಗಿದೆ.

ಮಾನ್ಯ ಉಪ ಲೋಕಾಯುಕ್ತ-1 ರವರು ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ತೊನಸನಹಳ್ಳಿ(ಎಸ್) ಗ್ರಾಮದಲ್ಲಿನ ಶರಣ ನಗರದಲ್ಲಿ ಸಿ.ಸಿ.ರಸ್ತೆ ಕಾಮಗಾರಿ, ದರ್ಗಾದ ಹತ್ತಿರ ಸಿ.ಸಿ.ರಸ್ತೆ ಕಾಮಗಾರಿ, ಗ್ರಾಮದ ಭಾವಿ ಹತ್ತಿರ ಅಂಗನವಾಡಿ ಕೇಂದ್ರಕ್ಕೆ ಕಂಪೌಂಡ ಗೋಡೆ ನಿರ್ಮಾಣ ಕಾಮಗಾರಿ, ನೀರು ನಿರ್ವಹಣೆ ಮಾಡುವ ಕಾಮಗಾರಿ, 13ನೇ ಹಣಕಾಸು ಯೋಜನೆಯಡಿಯಲ್ಲಿ ಪೈಪ್‌ಲೈನ್ ಮತ್ತು ಸಿಸ್ಟರ್ನ್ ಅಳವಡಿಸುವ ಕಾಮಗಾರಿ ಹಾಗೂ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ರಿಪೇರಿ ಕಾಮಗಾರಿಗಳನ್ನು ಮಂಜೂರಾದ ಅಂದಾಜು ಪಟ್ಟಿಯಂತೆ ನಿರ್ವಹಿಸಿಲ್ಲವೆಂದು, ನಿಯಮಿತವಾಗಿ ಕಾಮಗಾರಿಗಳನ್ನು ಪರಿವೀಕ್ಷಿಸಿಲ್ಲವೆಂದು, ಕಾಮಗಾರಿಗೆ ಬಳಸಲಾಗಿರುವ ಸರಕುಗಳ ಗುಣಮಟ್ಟವನ್ನು ಪರೀಕ್ಷಿಸಿಲ್ಲವೆಂದು, ಕಾಮಗಾರಿಗಳನ್ನು ಪ್ರಾರಂಭಿಸಿರುವ ದಿನಾಂಕ ಹಾಗೂ ಮುಕ್ತಾಯಗೊಂಡ ದಿನಾಂಕಗಳನ್ನು ನಮೂದಿಸಿಲ್ಲವೆಂದು, ಕಾಮಗಾರಿಯ ವಿವಿಧ ಹಂತದ ಛಾಯಾಚಿತ್ರಗಳನ್ನು ಹಾಜರುಪಡಿಸಿಲ್ಲವೆಂದು ಹಾಗೂ ಇನ್ನೂ ಮುಂತಾದ ನ್ಯೂನತೆಗಳು ಕಂಡುಬರುತ್ತವೆಯೆಂದು, ಆಪಾದಿತರಾದ ಶ್ರೀ ನಿಂಗಣ್ಣ ಶಿವಶರಣಪ್ಪ ಹುಲಗೋಳ್ಕರ್, ತಾಲ್ಲೂಕು ಪಂಚಾಯತ, ಸದಸ್ಯರು ಇವರ ವಿರುದ್ಧದ ಆರೋಪಗಳನ್ನು ಸಾಬೀತುಪಡಿಸಲು ಯಾವುದೇ ದಾಖಲೆಗಳು ಇರುವುದಿಲ್ಲವಾದ್ದರಿಂದ ಸದರಿಯವರ ವಿರುದ್ಧದ ಆರೋಪವನ್ನು ಕೈ ಬಿಡಲಾಗಿದೆಯೆಂದೂ, ಇನ್ನುಳಿದ ಇಬ್ಬರು ಆಪಾದಿತರುಗಳ ವಿರುದ್ಧದ ನಡವಳಿಕೆಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಅಂಶಗಳು ಕಂಡುಬರುವುದಿಲ್ಲವೆಂದು, ಹಾಗಾಗಿ ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಜಾಫರ್, ಕಿರಿಯ ಇಂಜಿನಿಯರ್ ಹಾಗೂ ಶ್ರೀ ಎನ್.ಹೆಚ್.ಕುಲಕರ್ಣಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಹಾಲಿ ನಿವೃತ್ತ) ಇವರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ತೋರದೆ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯ ಲೋಪ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಹಾಗೂ ಶ್ರೀ ಎನ್.ಹೆಚ್.ಕುಲಕರ್ಣಿ, ಅಂದಿನ

ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಹಾಗೂ ಪ್ರಕರಣ ನಡೆದು 4 ವರ್ಷಗಳು ಗತಿಸಿಲ್ಲದ ಕಾರಣ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 214 (2)(b)(ii)ರಡಿ ಮಂಜೂರಾತಿ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಸಿರುತ್ತದೆ. ಕಲಬುರಗಿ ಜಿಲ್ಲೆಯ ಚಿತ್ತಾಪೂರ ತಾಲ್ಲೂಕಿನ ತೊನಸನಹಳ್ಳಿ (ಎಸ್). ಗ್ರಾಮದಲ್ಲಿ ಕೈಗೊಂಡಿರುವ ಪ್ರಶ್ನಿತ ಕಾಮಗಾರಿಗಳನ್ನು ಮಂಜೂರಾದ ಅಂದಾಜು ಪಟ್ಟಿಯಂತೆ ಅನುಷ್ಟಾನಗೊಳಸದಿರುವುದು ದಾಖಲೆಗಳಂದ ಕಂಡುಬರುತ್ತದೆ. ಸದರಿ ಆಪಾದಿತರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರ ವಿರುದ್ಧ ಇಲಾಖಾ ವಿಚಾರಣೆ ನಡೆದುವುದು ಅವಶ್ಯವೆಂದು ಕಂಡುಬರುತ್ತದೆ. ಆದ್ದರಿಂದ ಸದರಿ ಇಬ್ಬರು ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಹಾಗೂ ಶ್ರೀ ಎನ್.ಹೆಚ್.ಕುಲಕರ್ಣಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ ಇವರು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)( ii) ರಡಿ ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 47 ಇಫಆನ್‌ಕ್ಯೂ 2017 ಬೆಂಗಳೂರು,</u>**
**<u>ದಿನಾಂಕ. 08.05.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಾಫರ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ.

ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತ ಅಧಿಕಾರಿಯಾದ ಶ್ರೀ ಎನ್.ಹೆಚ್.ಕುಲಕರ್ಣಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಚಿತ್ತಾಪೂರ ಇವರು ಸೇವೆಯಿಂದ ವಯೋ ನಿವೃತ್ತಿ ಹೊಂದಿರುವುದರಿಂದ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು

ಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (2)(ಬಿ)(ii) ರಡಿ ಅನುಮತಿ ), ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 7ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

08/05/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಉಪ ನಿಬಂಧಕರು ವಿಚಾರಣೆಗಳು-3, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಮುಖಾಂತರ.
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲ್ಲಾಖೆ (ಸೇವೆಗಳು-ಎ,ಬಿ&ಸಿ).
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.